**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1052
ಸದಸ್ಯರ ಹೆಸರು : ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21/09/2021
ಉತ್ತರಿಸುವವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ. |
|---|---|---|
| ಅ | ರಾಮನಗರ ನಗರಸಭೆ ವ್ಯಾಪ್ತಿಯಲ್ಲಿ ಶೌಚಗುಂಡಿಗಳನ್ನು ಸ್ವಚ್ಛತೆ ಮಾಡುವಲ್ಲಿ ಮರಣ ಹೊಂದಿದ ಕಾರ್ಮಿಕರ ಸಂಖ್ಯೆ ಎಷ್ಟು? | ರಾಮನಗರ ನಗರಸಭೆ ವ್ಯಾಪ್ತಿಯಲ್ಲಿ ಶೌಚಗುಂಡಿಗಳನ್ನು ಸ್ವಚ್ಛತೆ ಮಾಡುವ ಸಂದರ್ಭದಲ್ಲಿ ಯಾವುದೇ ಕಾರ್ಮಿಕರು ಮರಣ ಹೊಂದಿರುವುದಿಲ್ಲ. ಬದಲಾಗಿ ಯುಜಿಡಿ ಮ್ಯಾನ್‌ಹೋಲ್ ನಿರ್ಮಾಣ ಸಂದರ್ಭದಲ್ಲಿ ಗುತ್ತಿಗೆ ಪಡೆದ ಗುತ್ತಿಗೆದಾರರ ಮೂರು ಜನ ಕಾರ್ಮಿಕರು ಮರಣ ಹೊಂದಿರುತ್ತಾರೆ. |
| ಆ | ಮರಣ ಹೊಂದಿದ ಪ್ರತಿಯೊಬ್ಬ ಕಾರ್ಮಿಕ ಕುಟುಂಬಗಳಿಗೆ ನೀಡಿರುವ ಪರಿಹಾರದ ಮೊತ್ತವೆಷ್ಟು? | ನಗರಸಭಾ ವತಿಯಿಂದ ಪ್ರತಿಯೊಬ್ಬ ಮೃತಪಟ್ಟ ಕಾರ್ಮಿಕರ ಅವಲಂಭಿತರಿಗೆ ತಲಾ 10.00 ಲಕ್ಷಗಳ ಪರಿಹಾರ ನೀಡಲಾಗಿರುತ್ತದೆ. |
| ಇ | ಮರಣ ಹೊಂದಿದ ಕುಟುಂಬಗಳಿಗೆ ಪರಿಹಾರ ಮೊತ್ತ ನೀಡುವಲ್ಲಿ ತಾರತಮ್ಯ ಮಾಡಿರುವುದು ನಿಜವೇ? | ನಗರಸಭಾ ವತಿಯಿಂದ ನೀಡಿರುವ ಪರಿಹಾರದಲ್ಲಿ ಯಾವುದೇ ತಾರತಮ್ಯ ಮಾಡಿರುವುದಿಲ್ಲ. |
| ಈ | ಕಾಮಗಾರಿ ನಿರ್ವಹಣೆ ಮಾಡುವಲ್ಲಿ ಗುತ್ತಿಗೆದಾರರು ಲೋಪವೆಸಗಿದ್ದು, ಇವರ ಮೇಲೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ. | ಗುತ್ತಿಗೆದಾರರ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆ. ಪ್ರಕರಣ ವಿಚಾರಣೆ ಹಂತದಲ್ಲಿರುತ್ತದೆ. |
| ಉ | ಮರಣ ಹೊಂದಿದ ಕುಟುಂಬಗಳಿಗೆ ಏಕಸ್ವರೂಪವಾಗಿ ಪರಿಹಾರದ ಮೊತ್ತವನ್ನು ನೀಡಲು ಕ್ರಮಕೈಗೊಳ್ಳಲಾಗುವುದೇ? | ಮರಣಹೊಂದಿದ ಕೆಲಸಗಾರರ ಅವಲಂಬಿತ ಕುಟುಂಬದವರಿಗೆ ಏಕಸ್ವರೂಪವಾಗಿ ತಲಾ ರೂ 10.00 ಲಕ್ಷಗಳ ಪರಿಹಾರದ ಮೊತ್ತವನ್ನು ನೀಡಲಾಗಿರುತ್ತದೆ. |

ಸಂಖ್ಯೆ: ನಅಇ 205 ಜಿಇಎಲ್ 2021(ಇ)

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು